ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]


ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ ದಿನಾಂಕ : DATE : 11/2/2020

# ಪರಿಶಿಷ್ಟರಿಗೆ ಅಭಯ

## ಎಸ್ಸಿ,ಎಸ್ಟಿ ತಿದ್ದುಪಡಿ ಕಾಯ್ದೆ ಸಿಂಧುತ್ವ ಎತ್ತಿ ಹಿಡಿದ ಸುಪ್ರೀಂ

**ನವದೆಹಲಿ:** ದೇಶಾದ್ಯಂತ ಸಂಚಲನ ಮೂಡಿಸಿದ್ದ 2018ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿರುದ್ಧದ ದೌರ್ಜನ್ಯ ತಡೆ ತಿದ್ದುಪಡಿ ಕಾನೂನಿನ (ಅಟ್ರಾಸಿಟಿ ಕಾಯ್ದೆ) ಸಾಂವಿಧಾನಿಕ ಸಿಂಧುತ್ವವನ್ನು ಸುಪ್ರೀಂಕೋರ್ಟ್ ಸೋಮವಾರ ಎತ್ತಿ ಹಿಡಿದಿದೆ. ಈ ಕಾನೂನಿನನ್ವಯ ದಾಖಲಾಗುವ ಪ್ರಕರಣಗಳಲ್ಲಿ ಪ್ರಥಮ ಮಾಹಿತಿ ವರದಿ (ಎಫ್ಐಆರ್) ಸಲ್ಲಿಸುವ ಮುನ್ನ ಪ್ರಾಥಮಿಕ ತನಿಖೆಯ ಅಗತ್ಯವಿಲ್ಲ ಹಾಗೂ ಕೇಸ್ ದಾಖಲಿಸಲು ಉನ್ನತ ಪೊಲೀಸ್ ಅಧಿಕಾರಿಗಳ ಸಮ್ಮತಿಯೂ ಬೇಕಿಲ್ಲ ಎಂದೂ ನ್ಯಾಯಾಲಯ ಸ್ಪಷ್ಟಪಡಿಸಿದೆ. ದೂರಿನಲ್ಲಿ ಮಾಡಿರುವ ಆರೋಪದಲ್ಲಿ ಮೇಲ್ನೋಟಕ್ಕೆ ಹುರುಳಿಲ್ಲ ಎಂದು ಕಂಡುಬಂದಲ್ಲಿ ಮಾತ್ರವೇ ಆರೋಪಿಗೆ ನಿರೀಕ್ಷಣಾ ಜಾಮೀನು ನೀಡಬಹುದೆಂಬ ವಿಚಾರವೂ ತೀರ್ಪಿನಲ್ಲಿ ಸ್ಪಷ್ಟಗೊಂಡಿದೆ. ನ್ಯಾಯಮೂರ್ತಿಗಳಾದ ಅರುಣ್ ಮಿಶ್ರಾ ಮತ್ತು ರವೀಂದ್ರ ಭಟ್ ಅವರಿದ್ದ ಪೀಠ ಈ ತೀರ್ಪು ನೀಡಿದೆ.

ಪ್ರತಿ ನಾಗರಿಕರೂ ತಮ್ಮ ಸಹಜೀವಿಯನ್ನು ಸಮಾನವಾಗಿ ನೋಡಬೇಕು ಹಾಗೂ ಭ್ರಾತೃತ್ವದ ಪರಿಕಲ್ಪನೆಯನ್ನು ಎತ್ತಿಹಿಡಿಯಬೇಕು ಎಂದು ನ್ಯಾ. ಭಟ್ ಹೇಳಿದರು. ಎಸ್‌ಸಿ/ಎಸ್‌ಟಿ ಕಾಯ್ದೆಯನ್ವಯ ದಾಖಲಿಸಲಾದ ಪ್ರಕರಣದಲ್ಲಿ ಹುರುಳಿಲ್ಲ ಎಂಬುದು ಮೇಲ್ನೋಟಕ್ಕೆ ಕಂಡುಬಂದಲ್ಲಿ ನ್ಯಾಯಾಲಯವು ಎಫ್ಐಆರ್ ರದ್ದು ಮಾಡಬಹುದು. ನಿರೀಕ್ಷಣಾ ಜಾಮೀನಿನ ಅವಕಾಶವನ್ನು ಉದಾರವಾಗಿ ಬಳಸಿದಲ್ಲಿ ದಲಿತರಿಗೆ ರಕ್ಷಣೆ ನೀಡುವ ಸಂಸತ್ತಿನ ಉದ್ದೇಶವೇ ಸೋಲುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.



> **ನಿರೀಕ್ಷಣಾ ಜಾಮೀನಿನ ಅವಕಾಶವನ್ನು ಉದಾರವಾಗಿ ಬಳಸಿದಲ್ಲಿ ದಲಿತರಿಗೆ ರಕ್ಷಣೆ ನೀಡುವ ಸಂಸತ್ತಿನ ಉದ್ದೇಶವೇ ಸೋಲುತ್ತದೆ.**
>
> । ನ್ಯಾ. ರವೀಂದ್ರ ಭಟ್

ಎಸ್‌ಸಿ/ಎಸ್‌ಟಿ ಕಾನೂನನ್ನು ದುರ್ಬಲಗೊಳಿಸುವ ರೀತಿಯಲ್ಲಿದ್ದ ಸುಪ್ರೀಂಕೋರ್ಟ್‌ನ 2018ರ ತೀರ್ಪಿನ ಪರಿಣಾಮವನ್ನು ರದ್ದುಗೊಳಿಸುವ ಉದ್ದೇಶದಿಂದ 2018ರ ತಿದ್ದುಪಡಿ ಕಾನೂನು ತರಲಾಗಿತ್ತು. ಖಪುಟ 5

# ಪರಿಶಿಷ್ಟರಿಗೆ ಸುಪ್ರೀಂ ಕೋರ್ಟ್ ಅಭಯ

ಮೊದಲನೇ ಪುಟದಿಂದ ಇದರ ಸಿಂಧುತ್ವ ಪ್ರಶ್ನಿಸಿ ಹಲವು ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು (ಪಿಐಎಲ್) ಸಲ್ಲಿಸಲಾಗಿತ್ತು.

**ಕಿಡಿ ಹೊತ್ತಿಸಿದ್ದ ತೀರ್ಪು:** 2018 ಮಾ.20ರಂದು ಸುಪ್ರೀಂಕೋರ್ಟ್ ಹೊರಡಿಸಿದ್ದ ಮಾರ್ಗದರ್ಶಿ ಸೂತ್ರವೊಂದು 1989ರ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾನೂನನ್ನು ದುರ್ಬಲಗೊಳಿಸುತ್ತದೆ ಎಂಬ ಆರೋಪಕ್ಕೆ ಗುರಿಯಾಗಿ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು. ಕಾನೂನಿನ ದುರುಪಯೋಗ ತಡೆಗೆ ಈ ನಿರ್ದೇಶನ ನೀಡಬೇಕಾಗಿದೆ ಎಂದು ಕೋರ್ಟ್ ಹೇಳಿತ್ತು. ದೌರ್ಜನ್ಯದ ದೂರನ್ನು ಕೊಟ್ಟ ತಕ್ಷಣವೇ ಆರೋಪಿಯನ್ನು ಬಂಧಿಸಬೇಕಿಲ್ಲ. ಒಂದು ವೇಳೆ ಆರೋಪಿ ಸರ್ಕಾರಿ ನೌಕರನಾಗಿದ್ದಲ್ಲಿ ಬಂಧನಕ್ಕೆ ಸಕ್ಷಮ ಅಧಿಕಾರಿಯ ಅನುಮತಿ ಪಡೆಯಬೇಕು. ಸಾಮಾನ್ಯರಾಗಿದ್ದಲ್ಲಿ ಜಿಲ್ಲಾ ರಕ್ಷಣಾಧಿಕಾರಿಯ (ಎಸ್‌ಪಿ) ಅನುಮತಿ ಪಡೆಯಬೇಕೆಂದು ನ್ಯಾಯಾಲಯ ಹೇಳಿತ್ತು. ಇದನ್ನು ಬಹುತೇಕ ಪ್ರತಿಪಕ್ಷಗಳು ಹಾಗೂ ದಲಿತ ಸಂಘಟನೆಗಳು ವಿರೋಧಿಸಿದ್ದವು. ಆಳುವ ಎನ್‌ಡಿಎ ಭಾಗವಾಗಿರುವ ರಾಮ ವಿಲಾಸ್ ಪಾಸ್ವಾನ್‌ರ ಲೋಕ ಜನಶಕ್ತಿ ಪಾರ್ಟಿ ಕೂಡ ವಿರೋಧಿಸಿತ್ತು. ಪ್ರಮುಖವಾಗಿ ಉತ್ತರ ಪ್ರದೇಶದಲ್ಲಿ ಭುಗಿಲೆದ್ದ ಹಿಂಸಾತ್ಮಕ ಪ್ರತಿಭಟನೆಯಲ್ಲಿ ಹಲವು ಜನರು ಮೃತಪಟ್ಟಿದ್ದರು. ದೇಶದಾದ್ಯಂತ ಆಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಮರುಪರಿಶೀಲನಾ ಅರ್ಜಿ ಸಲ್ಲಿಸಿತ್ತು. ಅಲ್ಲದೆ ಸುಪ್ರೀಂ ಕೋರ್ಟ್‌ನ ಮಾರ್ಗದರ್ಶಿ ಸೂತ್ರಗಳ ಪರಿಣಾಮವನ್ನು ತೊಡೆದುಹಾಕಲು ಸಂಸತ್ತಿನಲ್ಲಿ ತಿದ್ದುಪಡಿ ಮಸೂದೆಯನ್ನು ಮಂಡಿಸಿತ್ತು. ಅದು ಅವಿರೋಧವಾಗಿ ಅಂಗೀಕಾರವಾಗಿ ತಿದ್ದುಪಡಿ ಕಾನೂನಾಯಿತು.